# ಕರ್ನಾಟಕ ಸರ್ಕಾರ
# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ. ದೇವರಾಜ ಅರಸು ಭವನ,
ಮಿಲ್ಲರ್ಸ್ ಕೆರೆ ಅಂಗಳ, ವಸಂತನಗರ, ಬೆಂಗಳೂರು-560052.

ಸಂ:ಹಿಂವಕಇ/ತ-1/ಪಪೂತ/ಸಿಆರ್-01/2023-24 ದಿನಾಂಕ:16.11.2023

## ಪ್ರಕಟಣೆ

UPSC ನಾಗರೀಕ ಸೇವೆ ಮತ್ತು Banking P.O ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2023-24ನೇ ಸಾಲಿನಲ್ಲಿ ಉಚಿತ ಪರೀಕ್ಷಾ ಪೂರ್ವ ತರಬೇತಿ ನೀಡುತ್ತಿದ್ದು, ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ) ಗಳಿಗೆ ಸೇರಿದ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. Online ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:04.12.2023 ಆಗಿದ್ದು, ಹೆಚ್ಚಿನ ವಿವರಗಳಿಗಾಗಿ ಇಲಾಖಾ ವೆಬ್‌ಸೈಟ್ **https://bcwd.karnataka.gov.in/**ನ್ನು ನೋಡುವುದು.

**ಅರ್ಹತೆ ಮತ್ತು ಸೂಚನೆಗಳು:**

1. ಅಂಗೀಕೃತ ವಿಶ್ವವಿದ್ಯಾಲಯದಿಂದ ಯಾವುದಾದರೊಂದು ಪದವಿ ಪಡೆದಿರಬೇಕು.
2. ಅಭ್ಯರ್ಥಿಯು ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಅಥವಾ 3(ಬಿ) ಗೆ ಸೇರಿರಬೇಕು.
3. ಅಭ್ಯರ್ಥಿಯ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ – ಗರಿಷ್ಠ ರೂ.5.00 ಲಕ್ಷಗಳು
4. On-line ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:04.12.2023
5. ಅಭ್ಯರ್ಥಿಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ರವರು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಗಳಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.
6. ಪರೀಕ್ಷಾ ಕೇಂದ್ರಗಳು, ದಿನಾಂಕ ಮತ್ತು ಸಮಯವನ್ನು ನಂತರದ ದಿನಗಳಲ್ಲಿ ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸಲಾಗುವುದು.
7. ಹೆಚ್ಚಿನ ವಿವರಗಳಿಗಾಗಿ ಇಲಾಖಾ ವೆಬ್‌ಸೈಟ್ **https://bcwd.karnataka.gov.in/** ಅನ್ನು ನೋಡುವುದು.

ಸಹಾಯ ವಾಣಿ:8050770004 (ಸಮಯ ಬೆಳಗ್ಗೆ 10.00 ರಿಂದ ಸಂಜೆ 5.30ರ ವರೆಗೆ, ಸಾರ್ವಜನಿಕ ರಜಾ ದಿನಗಳನ್ನು ಹೊರತು ಪಡಿಸಿ)

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.

# ಕರ್ನಾಟಕ ಸರ್ಕಾರ
# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ. ದೇವರಾಜ ಅರಸು ಭವನ,
ಮಿಲ್ಲರ್ಸ್ ಕೆರೆ ಅಂಗಳ, ವಸಂತನಗರ, ಬೆಂಗಳೂರು-560052.

## ಅಭ್ಯರ್ಥಿಗಳಿಗೆ ಸೂಚನೆಗಳು (Instructions to Candidates)

(ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಲ್ಪಸಂಖ್ಯಾತ ಅಭ್ಯರ್ಥಿಗಳಿಗೆ ಆಯಾ ಇಲಾಖೆಯಿಂದ ತರಬೇತಿ ನೀಡುತ್ತಿರುವ ಕಾರಣ ಆಯಾ ಇಲಾಖೆಯನ್ನು ಸಂಪರ್ಕಿಸುವುದು)

ಸಂ:ಹಿಂವಕಇ/ತ-1/ಪಪೂತ/ಸಿಆರ್-01/2023-24 ದಿನಾಂಕ:16.11.2023

1. ಈ ಹಿಂದೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಯಾವುದೇ ಸ್ಪರ್ಧಾತ್ಮಕ ಪರೀಕ್ಷೆಯ ಪರೀಕ್ಷಾ ಪೂರ್ವ ತರಬೇತಿ ಪಡೆದಿದ್ದಲ್ಲಿ, ಅಂತಹ ಅಭ್ಯರ್ಥಿಗಳು ಪುನಃ ಅರ್ಜಿ ಸಲ್ಲಿಸಲು ಮತ್ತು ತರಬೇತಿ ಪಡೆಯಲು ಅರ್ಹರಿರುವುದಿಲ್ಲ.
2. ಕೇಂದ್ರ/ರಾಜ್ಯ ಸರ್ಕಾರದ/ಅನುದಾನಿತ ಸಂಸ್ಥೆಗಳ/ಸಾರ್ವಜನಿಕ ಸ್ವಾಮ್ಯತೆಗೆ ಒಳಪಟ್ಟ ಸಂಸ್ಥೆಗಳಲ್ಲಿನ ನೌಕರರು ಸದರಿ ಕಾರ್ಯಕ್ರಮದಡಿ ಅರ್ಜಿ ಸಲ್ಲಿಸಲು ಮತ್ತು ತರಬೇತಿ ಪಡೆಯಲು ಅರ್ಹರಿರುವುದಿಲ್ಲ.
3. ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ) ಗಳಿಗೆ ಸೇರಿದ ಅರ್ಹ ಅಭ್ಯರ್ಥಿಗಳು Online ಮೂಲಕ ಅರ್ಜಿಗಳನ್ನು ಸಲ್ಲಿಸುವುದು.
4. ಅಭ್ಯರ್ಥಿಯು ಕರ್ನಾಟಕದ ಖಾಯಂ ನಿವಾಸಿಯಾಗಿದ್ದು, ಕನಿಷ್ಠ 7 ವರ್ಷಗಳ ಕಾಲ ಕರ್ನಾಟಕದಲ್ಲಿ ಅಧ್ಯಯನ ಮಾಡಿರಬೇಕು.
5. 2023-24ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಗೆ UPSC ನಾಗರೀಕ ಸೇವೆ ಮತ್ತು Banking P.O ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ಪರೀಕ್ಷಾ ಪೂರ್ವ ತರಬೇತಿಯನ್ನು ನೀಡಲಾಗುವುದು.
6. UPSC ನಾಗರೀಕ ಸೇವೆ ಮತ್ತು Banking P.O ಸ್ಪರ್ಧಾತ್ಮಕ ಪರೀಕ್ಷೆಗಳ ಪರೀಕ್ಷಾ ಪೂರ್ವ ತರಬೇತಿಗೆ ಅಭ್ಯರ್ಥಿಗಳು ಒಂದೇ ಅರ್ಜಿಯನ್ನು ಸಲ್ಲಿಸುವುದು. ಒಬ್ಬ ಅಭ್ಯರ್ಥಿಗೆ ಒಂದು ತರಬೇತಿಯನ್ನು ಪಡೆಯಲು ಮಾತ್ರ ಅವಕಾಶವಿರುತ್ತದೆ. ಅನುದಾನದ ಲಭ್ಯತೆಗನುಗುಣವಾಗಿ ಭೌತಿಕ ಗುರಿ ಹಾಗೂ ಮಾಸಿಕ ಶಿಷ್ಯವೇತನ ನಿಗದಿಪಡಿಸಲಾಗುವುದು. ಅನುದಾನ ಲಭ್ಯವಿಲ್ಲದಿದ್ದಲ್ಲಿ ಅಭ್ಯರ್ಥಿಗಳಿಗೆ ಶಿಷ್ಯವೇತನ ರಹಿತ ಪರೀಕ್ಷಾ ಪೂರ್ವ ತರಬೇತಿಯನ್ನು ಮಾತ್ರ ನೀಡಲಾಗುವುದು.
7. **ತರಬೇತಿಯ ಅವಧಿ:**

| ಕ್ರ. ಸಂ | ಪರೀಕ್ಷಾ ಪೂರ್ವ ತರಬೇತಿ ಹೆಸರು | ವಿಷಯ | ತರಬೇತಿ ಅವಧಿ |
|---|---|---|---|
| 1 | UPSC ನಾಗರೀಕ ಸೇವೆ | ಪೂರ್ವಭಾವಿ ಮತ್ತು ಮುಖ್ಯ ಪರೀಕ್ಷೆ (General Studies, 1 Optional Subject) | 7-9 ತಿಂಗಳು |
| 2 | Banking P.O | ಬ್ಯಾಂಕಿಂಗ್ ನೇಮಕಾತಿ ಪರೀಕ್ಷೆಯ ಸಮಗ್ರ ವಿಷಯಗಳು | ಕನಿಷ್ಠ 2 ರಿಂದ 3 ತಿಂಗಳುಗಳು |

8. ಒಬ್ಬ ಅಭ್ಯರ್ಥಿಯು ಆನ್ ಲೈನ್ ನಲ್ಲಿ ಒಂದು ಅರ್ಜಿಯನ್ನು ಮಾತ್ರ ಸಲ್ಲಿಸುವುದು. ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿರುವುದು ಕಂಡು ಬಂದಲ್ಲಿ, ಅಂತಹ ಅಭ್ಯರ್ಥಿಯ ಎಲ್ಲಾ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
9. ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗಳ ವಿಳಾಸದ ವಿವರಗಳು ಇಲಾಖಾ ವೆಬ್‌ಸೈಟ್ **https://bcwd.karnataka.gov.in/** ನಲ್ಲಿ ಲಭ್ಯವಿರುತ್ತದೆ.
10. ಅರ್ಹತೆ:
    a) ಅಭ್ಯರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.
    b) ಹಿಂದುಳಿದ ವರ್ಗಗಳಾದ ಪ್ರವರ್ಗ-1, 2(ಎ), 3(ಎ) ಅಥವಾ 3(ಬಿ) ಗಳಿಗೆ ಸೇರಿರಬೇಕು.
    c) ಅಭ್ಯರ್ಥಿಯ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ – ಗರಿಷ್ಠ ರೂ.5.00 ಲಕ್ಷಗಳು.
    d) ಜಾತಿ ಮತ್ತು ಆದಾಯ ದೃಢೀಕರಣ ಪತ್ರವು ಅಭ್ಯರ್ಥಿಯ ಹೆಸರಿನಲ್ಲಿಯೇ ಪಡೆದಿರಬೇಕು.
    e) ವಿದ್ಯಾರ್ಹತೆ- ಅಂಗೀಕೃತ ವಿಶ್ವವಿದ್ಯಾಲಯದಿಂದ ಪದವಿಯನ್ನು ಪಡೆದಿರಬೇಕು.
    f) ತರಬೇತಿಯನ್ನು ಪಡೆಯಲು ನಿಗದಿಪಡಿಸಿರುವ ವಯೋಮಿತಿ (04.12.2023ಕ್ಕೆ ಅನ್ವಯಿಸುವಂತೆ)–

| ಕ್ರ.ಸಂ | ಪರೀಕ್ಷಾ ಪೂರ್ವ ತರಬೇತಿ | ಕನಿಷ್ಠ ವಯಸ್ಸು | ಗರಿಷ್ಠ ವಯಸ್ಸು |
|---|---|---|---|
| 1 | UPSC ನಾಗರೀಕ ಸೇವೆ | 21 | 31 |
| 2 | Banking P.O | 21 | 27 |

11. ಅಭ್ಯರ್ಥಿಯ ಇತ್ತೀಚಿನ ಭಾವಚಿತ್ರ (ಗರಿಷ್ಠ 100 kilo byte) ಹಾಗೂ ಅಭ್ಯರ್ಥಿಯ ಸಹಿ (ಗರಿಷ್ಠ 40 kilo byte) ಯನ್ನು Scan ಮಾಡಿ JPEG/JPG format ನಲ್ಲಿ Upload ಮಾಡಬೇಕು. ಎಲ್ಲಾ ಸೆಮಿಸ್ಟರ್/ವರ್ಷಗಳ ಅಂಕಪಟ್ಟಿಗಳನ್ನು PDF format (ಗರಿಷ್ಠ 1 MB) ನಲ್ಲಿ Upload ಮಾಡಬೇಕು. ಜಾತಿ ಮತ್ತು ಆದಾಯ ಪ್ರಮಾಣ ಪತ್ರ 10ನೇ ತರಗತಿ ಅಂಕ ಪಟ್ಟಿ ಇತ್ಯಾದಿಯನ್ನು PDF format (ಗರಿಷ್ಠ 200 KB) ನಲ್ಲಿ Upload ಮಾಡಬೇಕು.
12. ಅಭ್ಯರ್ಥಿಗಳು UPSC ನಾಗರೀಕ ಸೇವೆ ಮತ್ತು Banking P.O ಎರಡು ಪರೀಕ್ಷಾ ಪೂರ್ವ ತರಬೇತಿಗಳಿಗೆ ಅರ್ಜಿಯನ್ನು ಸಲ್ಲಿಸಬಹುದಾಗಿದ್ದು, ಅಭ್ಯರ್ಥಿಗಳು ಎರಡು ಅವಧಿಯ ಸಾಮಾನ್ಯ ಪ್ರವೇಶ ಪರೀಕ್ಷೆಗಳನ್ನು ಬರೆಯಲು ಅರ್ಹರಿರುತ್ತಾರೆ. ಅಭ್ಯರ್ಥಿಯು ಎರಡು ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದರೆ ಎರಡು ತರಬೇತಿಗೂ ಆಯ್ಕೆಯಾಗುತ್ತಾರೆ. ಆದರೆ ಅಂತಿಮವಾಗಿ ಅಭ್ಯರ್ಥಿಯು ಯಾವುದಾದರು ಒಂದು ತರಬೇತಿಯನ್ನು ಪಡೆಯಲು ಮಾತ್ರ ಅರ್ಹರಿರುತ್ತಾರೆ.
13. ಅಭ್ಯರ್ಥಿಯ ಬ್ಯಾಂಕ್ ಖಾತೆಯ ವಿವರ: ಅಭ್ಯರ್ಥಿಯು ಯಾವುದೇ ರಾಷ್ಟ್ರೀಕೃತ ಬ್ಯಾಂಕ್ ನಲ್ಲಿ ಖಾತೆಯನ್ನು ಹೊಂದಿದ್ದು, ಬ್ಯಾಂಕ್‌ನ ಹೆಸರು, ಶಾಖೆ, ಖಾತೆ ಸಂಖ್ಯೆ ಮತ್ತು IFSC ಕೋಡ್ ಗಳನ್ನು ಕಡ್ಡಾಯವಾಗಿ ಅರ್ಜಿಯ ನಿಗದಿತ ಸ್ಥಳದಲ್ಲಿ ನಮೂದಿಸುವುದು.
14. ತಪ್ಪು ಮಾಹಿತಿಯ ಕಾರಣದಿಂದ ಉಂಟಾಗಬಹುದಾದ ಯಾವುದೇ ಲೋಪಗಳಿಗೆ ಸಂಬಂಧಪಟ್ಟ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ.

15. ಇಲಾಖಾವತಿಯಿಂದ ಯಾವುದೇ ಪತ್ರ ವ್ಯವಹಾರವನ್ನು ನಡೆಸಲಾಗುವುದಿಲ್ಲವಾದ್ದರಿಂದ ಇಲಾಖಾ ವೆಬ್ ಸೈಟ್ ಅನ್ನು ಕಾಲಕಾಲಕ್ಕೆ ವೀಕ್ಷಿಸತಕ್ಕದ್ದು ಹಾಗೂ ವೆಬ್ ಸೈಟ್ ನಲ್ಲಿ ನೀಡಲಾದ ಸೂಚನೆಯಾನುಸಾರವಾಗಿ ಪ್ರವೇಶ ಪರೀಕ್ಷಾ ಪತ್ರ ಡೌನ್ ಲೋಡ್ ಮಾಡಿಕೊಂಡು, ಸಾಮಾನ್ಯ ಪ್ರವೇಶ ಪರೀಕ್ಷೆಗೆ, ತರಬೇತಿ ಸಂಸ್ಥೆಯ ಆಯ್ಕೆ ಹಾಗೂ ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗುವುದು.

16. **ಸಾಮಾನ್ಯ ಪ್ರವೇಶ ಪರೀಕ್ಷೆಯ syllabus:**
   a) UPSC ನಾಗರೀಕ ಸೇವೆ ಮತ್ತು Banking P.O ಪರೀಕ್ಷೆಗಳ ಪರೀಕ್ಷಾ ಪೂರ್ವ ತರಬೇತಿಗಳಿಗೆ ಆಯಾ ಪ್ರಾಧಿಕಾರಗಳು ನಿಗದಿಪಡಿಸಿರುವ ಪಠ್ಯಕ್ರಮದನ್ವಯ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸಲಾಗುವುದು.
   b) UPSC ನಾಗರೀಕ ಸೇವೆ ಮತ್ತು Banking P.O ಪರೀಕ್ಷಾ ಪೂರ್ವ ತರಬೇತಿಗಳಿಗಾಗಿ ಬಹು ಆಯ್ಕೆ ಪ್ರಶ್ನೆಗಳು ಇರುವಂತೆ ಎರಡು ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಪ್ರತ್ಯೇಕವಾಗಿ ನಡೆಸಲಾಗುವುದು.

17. **ಸಾಮಾನ್ಯ ಪ್ರವೇಶ ಪರೀಕ್ಷೆಗೆ ಸೂಚನೆಗಳು:** ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಯುವ ದಿನಾಂಕ, ಸಮಯ ಮತ್ತು ಪರೀಕ್ಷಾ ಕೇಂದ್ರಗಳ ವಿವರವನ್ನು ನಂತರ ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗುವುದು.

18. **ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರುಪಡಿಸಬೇಕಾದ ದಾಖಲೆಗಳು:**
   - ಅಭ್ಯರ್ಥಿಗಳು ಸಲ್ಲಿಸಿರುವ ಆನ್‌ಲೈನ್ ಅರ್ಜಿ ಪ್ರತಿ/ಸ್ವೀಕೃತಿ ಪ್ರತಿ.
   - ಅಭ್ಯರ್ಥಿಯ ಭಾವಚಿತ್ರ ಮತ್ತು ವಿಳಾಸವಿರುವ ಯಾವುದಾದರೊಂದು ಅಧಿಕೃತ ಗುರುತಿನ ಚೀಟಿ.

19. **ಆಯ್ಕೆ ವಿಧಾನ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಗಳಿಸಿದ ಅಂಕಗಳು, ಪ್ರವರ್ಗವಾರು ಮೀಸಲಾತಿ, ವಿವಿಧ ಸಂಸ್ಥೆಗಳಲ್ಲಿ ಲಭ್ಯವಿರುವ ಸ್ಥಾನಗಳು, ಅನುದಾನ ಲಭ್ಯತೆ ಆಧಾರದ ಮೇಲೆ ಅಭ್ಯರ್ಥಿಗಳನ್ನು ನಿಯಮಾನುಸಾರ ಆಯ್ಕೆ ಮಾಡಲಾಗುವುದು.

20. **ಮೂಲ ದಾಖಲೆಗಳ ಪರಿಶೀಲನೆ:-** ತಾತ್ಕಾಲಿಕ ಪಟ್ಟಿಯಲ್ಲಿನ ಅಭ್ಯರ್ಥಿಗಳು ನಿಗದಿತ ದಿನಾಂಕದಂದು ಕಡ್ಡಾಯವಾಗಿ ಸಲ್ಲಿಸಬೇಕಾದ ಮೂಲ ದಾಖಲೆಗಳು (ತಾತ್ಕಾಲಿಕ ಪಟ್ಟಿ,

ಮೂಲ ದಾಖಲೆಗಳ ಪರಿಶೀಲನಾ ದಿನಾಂಕ, ಸ್ಥಳ ಹಾಗೂ ಸಮಯವನ್ನು ನಂತರ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು) -

- ಅಭ್ಯರ್ಥಿಯ ಹೆಸರಿನಲ್ಲಿರುವ ಜಾತಿ ಮತ್ತು ಆದಾಯ ದೃಢೀಕರಣ ಪತ್ರ(ತಹಶೀಲ್ದಾರರಿಂದ ಪಡೆದಿರಬೇಕು).
- ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ 2 ಭಾವಚಿತ್ರ.
- ಎಸ್.ಎಸ್.ಎಲ್.ಸಿ. ಅಂಕ ಪಟ್ಟಿ.
- ಘಟಿಕೋತ್ಸವ ಪ್ರಮಾಣ ಪತ್ರ/ತಾತ್ಕಾಲಿಕ ಪದವಿ ಪ್ರಮಾಣ ಪತ್ರ (Convocation Certificate/Provisional Degree Certificate)
- ಅಭ್ಯರ್ಥಿಯ ಬ್ಯಾಂಕ್ ಖಾತೆ ವಿವರ (ಅಭ್ಯರ್ಥಿಯು ಯಾವುದೇ ರಾಷ್ಟ್ರೀಕೃತ ಬ್ಯಾಂಕ್ ನಲ್ಲಿ ಖಾತೆಯನ್ನು ಹೊಂದಿದ್ದು, ಬ್ಯಾಂಕ್‌ನ ಹೆಸರು, ಶಾಖೆ, ಖಾತೆ ಸಂಖ್ಯೆ ಹಾಗೂ IFSC ಗಳ ವಿವರ ಇರುವ ಪುಟದ ಸ್ವತಃ ದೃಢೀಕರಿಸಿರುವ ಜೆರಾಕ್ಸ್ ಪ್ರತಿ)
- ಆನ್-ಲೈನ್ ಅರ್ಜಿಯೊಂದಿಗೆ ಸಲ್ಲಿಸಿರುವ ಎಲ್ಲಾ ದಾಖಲೆಗಳು.
- ಮೇಲ್ಕಾಣಿಸಿದ ಮೂಲ ದಾಖಲೆಗಳ ಒಂದು ಸೆಟ್ ದೃಢೀಕೃತ ಅಥವಾ ಸ್ವತಃ ದೃಢೀಕರಿಸಿರುವ ಜೆರಾಕ್ಸ್ ಪ್ರತಿಯನ್ನು ಸಲ್ಲಿಸಬೇಕು.

21. ಅಂತಿಮವಾಗಿ ಅರ್ಜಿಯನ್ನು submit ಮಾಡುವ ಮುನ್ನ ಎಲ್ಲಾ ಅಂಶಗಳೂ ಸರಿಯಾಗಿರುವ ಬಗ್ಗೆ Preview ನೋಡಿ ಖಚಿತ ಪಡಿಸಿಕೊಳ್ಳಬೇಕು. ಸರಿಯಾದ ಮಾಹಿತಿ ನೀಡದ/ಅಪೂರ್ಣ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
22. ಅಭ್ಯರ್ಥಿಯು ತಪ್ಪು ಮಾಹಿತಿ ನೀಡಿರುವುದು/ಅನರ್ಹ ಅಭ್ಯರ್ಥಿಯೆಂದು ಯಾವುದೇ ಹಂತದಲ್ಲಿ ಕಂಡು ಬಂದಲ್ಲಿ ಅಂತಹ ಅಭ್ಯರ್ಥಿಯ ವಿರುದ್ಧ ನಿಯಮಾನುಸಾರ ಸೂಕ್ತ ಕ್ರಮ ಜರುಗಿಸಲಾಗುವುದು.
23. ಅರ್ಜಿಯ ಪ್ರತಿಯನ್ನು Print option ನೀಡುವ ಮೂಲಕ ಪಡೆಯಬಹುದು.
24. **Online** ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:04.12.2023 ಸಂಜೆ 5.00 ಗಂಟೆ

ಸಹಾಯ ವಾಣಿ: 8050370004 (ಸಮಯ ಬೆಳಗ್ಗೆ 10.00 ರಿಂದ ಸಂಜೆ 5.30ರ ವರೆಗೆ, ಸಾರ್ವಜನಿಕ ರಜಾ ದಿನಗಳನ್ನು ಹೊರತು ಪಡಿಸಿ)

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.